# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 966 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 22.02.2024 |
| ಉತ್ತರಿಸಬೇಕಾದ ಸಚಿವರು | : | ಉಪ ಮುಖ್ಯಮಂತ್ರಿಯವರು |

*****

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ಈ ವರ್ಷ ಮಳೆ ತುಂಬಾ ಕಡಿಮೆಯಾಗಿರುವುದರಿಂದ ಬೇಸಿಗೆ ಆರಂಭ ಮುನ್ನವೇ ನಗರದಲ್ಲಿ ನೀರಿನ ಕೊರತೆಯಿಂದಾಗಿ ಸಮಸ್ಯೆ ಆಗುತ್ತಿರುವುದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ವಿವರ ನೀಡುವುದು) | ಗಮನಕ್ಕೆ ಬಂದಿರುತ್ತದೆ. |
| ಆ) | ಬೆಂಗಳೂರು ನಗರಕ್ಕೆ ನೀರನ್ನು ಪೂರೈಸಲು ಸಾರ್ವಜನಿಕರ ನೀರಿನ ತೊಂದರೆಗಳನ್ನು ನಿಭಾಯಿಸಲು ಸರ್ಕಾರ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ; (ವಿವರ ನೀಡುವುದು) | ಬೆಂಗಳೂರು ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸಲು ಬೆಂಗಳೂರು ಜಲಮಂಡಳಿಯು ಈ ಕೆಳಕಂಡ ಕ್ರಮವನ್ನು ವಹಿಸಿದೆ.<br>• ಕಾವೇರಿ ಮೂಲದಿಂದ ಬೆಂಗಳೂರು ನಗರಕ್ಕೆ ದಿನಂಪ್ರತಿ 1450 ದಶಲಕ್ಷ ಲೀಟರ್ ನೀರು ಸರಬರಾಜು ಮಾಡಲಾಗುತ್ತಿದೆ.<br>• ಬೆಂಗಳೂರು ನಗರದ ಹಳೆಯ ಪ್ರದೇಶಕ್ಕೆ (ಕೋರ್ ಏರಿಯಾ) ಹಾಗೂ ಹಳೆಯ 7 ನಗರಸಭೆ ಹಾಗೂ 1 ಪುರಸಭೆ ಪ್ರದೇಶಗಳಿಗೆ ಪರ್ಯಾಯ ದಿನಗಳಲ್ಲಿ ಕಾವೇರಿ ನೀರನ್ನು ಸರಬರಾಜು ಮಾಡಲಾಗುತ್ತಿದೆ.<br>• ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ 110 ಹಳ್ಳಿಗಳ ಪೈಕಿ ಕಾವೇರಿ ಕುಡಿಯುವ ನೀರಿನ ಲಭ್ಯತೆ ಖಾತರಿಪಡಿಸಿಕೊಂಡು 51 ಹಳ್ಳಿಗಳಿಗೆ ವಾರಕ್ಕೊಮ್ಮೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ.<br>• ವಾಟರ್ ಟ್ಯಾಂಕರ್‌ಗಳ ಮುಖಾಂತರ ತುರ್ತು ನೀರು ಸರಬರಾಜು ಮಾಡಲು ಹೆಚ್ಚುವರಿ ನೀರಿನ ಫಿಲ್ಲಿಂಗ್ ಪಾಯಿಂಟ್‌ಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>• ಬೆಂಗಳೂರು ಜಲಮಂಡಳಿಯ ವಾಟರ್ ಟ್ಯಾಂಕರ್‌ಗಳನ್ನು ಹೊರತುಪಡಿಸಿ ಹೆಚ್ಚುವರಿಯಾಗಿ ಖಾಸಗಿ ನೀರಿನ ಟ್ಯಾಂಕರ್‌ಗಳ ಮುಖಾಂತರ ನೀರನ್ನು ಸರಬರಾಜು ಮಾಡಲು ಉದ್ದೇಶಿಸಲಾಗಿದೆ.<br>• ಹಾಲಿ ದುರಸ್ಥಿಯಲ್ಲಿರುವ ವಿದ್ಯುತ್ ಚಾಲಿತ ಕೊಳವೆ ಬಾವಿಗಳನ್ನು ತುರ್ತಾಗಿ ದುರಸ್ಥಿಪಡಿಸಿ ಅವುಗಳಿಂದ ಸಾರ್ವಜನಿಕರಿಗೆ ನೀರು ಸರಬರಾಜು ಮಾಡಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.<br>• ಕಡಿಮೆ ಇಳುವರಿ ಇರುವ ಕೊಳವೆ ಬಾವಿಗಳನ್ನು ಗುರುತಿಸಿ ಅವುಗಳನ್ನು ಮರು ಡ್ರಿಲ್ಲಿಂಗ್ ಮಾಡಿ ನೀರಿನ ಇಳುವರಿಯನ್ನು ಹೆಚ್ಚಿಸಿ ಕೊಳವೆ ಬಾವಿಗೆ ಸೂಕ್ತ ಕೊಳವೆ ಮಾರ್ಗವನ್ನು ಅಳವಡಿಸಿ ಸಾರ್ವಜನಿಕರಿಗೆ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ.<br>• ಕೊಳವೆ ಬಾವಿಗಳ ನಿರ್ವಹಣೆಗಾಗಿ ಬೇಕಾಗುವ ಸಾಮಗ್ರಿಗಳನ್ನು ಕೇಂದ್ರ ಉಗ್ರಾಣದಲ್ಲಿ ಅಗತ್ಯ ಪ್ರಮಾಣದಲ್ಲಿ ಶೇಖರಿಸಲಾಗಿರುತ್ತದೆ. |

| | | |
|---|---|---|
| | | • ಬೆಂಗಳೂರು ನಗರಕ್ಕೆ ಹಂಚಿಕೆಯಾಗಿರುವ ಕಾವೇರಿ ನೀರನ್ನು ಬೇಸಿಗೆಯಲ್ಲಿ ಫೆಬ್ರವರಿ-2024 ರಿಂದ ಜುಲೈ-2024ರವರೆಗೆ ಒಟ್ಟು 11.24 ಟಿ.ಎಂ.ಸಿ. ನೀರನ್ನು ಜಲಾಶಯದಲ್ಲಿ ಶೇಖರಿಸಿ ಸರಬರಾಜು ಮಾಡಲು ಕಾವೇರಿ ನೀರಾವರಿ ನಿಗಮವನ್ನು ಕೋರಲಾಗಿದೆ.<br>• ಬೆಂಗಳೂರು ಜಲಮಂಡಳಿಯ ಸುಪರ್ದಿಯಲ್ಲಿರುವ ಸುಮಾರು 10,789 ಕೊಳವೆ ಬಾವಿಗಳನ್ನು ಸುಸ್ಥಿತಿಯಲ್ಲಿಟ್ಟು ಇದರ ಮೂಲಕ ನಗರದ ಜನರಿಗೆ ನೀರು ಸರಬರಾಜು ಮಾಡಲಾಗುತ್ತಿದೆ. ಬೇಸಿಗೆಯಲ್ಲಿ ಈ ಕೊಳವೆ ಬಾವಿಗಳ ನಿರ್ವಹಣೆಗಾಗಿ ಬೇಕಾಗುವ ಸಾಮಾಗ್ರಿಗಳನ್ನು ಕೇಂದ್ರ ಉಗ್ರಾಣದಲ್ಲಿ ಅಗತ್ಯ ಪ್ರಮಾಣದಲ್ಲಿ ಈಗಾಗಲೇ ಶೇಖರಿಸಲಾಗಿರುತ್ತದೆ. |
| ಇ) | ಈ ಹಿಂದೆ ಒಂದು ಮನೆಗೆ ಎಷ್ಟು ಲೀಟರ್ ನೀರನ್ನು ಪೂರೈಸಲಾಗುತ್ತಿತ್ತು ಮತ್ತು ಪ್ರಸ್ತುತ ದಿನಗಳಲ್ಲಿ ಎಷ್ಟು ಲೀಟರ್ ನೀರನ್ನು ಪೂರೈಸುತ್ತಿದೆ; (ಇದರ ವಿವರ ನೀಡುವುದು) | ಈ ಹಿಂದೆ ಒಂದು ಮನೆಗೆ ಬೆಂಗಳೂರು ಜಲಮಂಡಳಿ ವತಿಯಿಂದ ಪ್ರತಿ ದಿನ ಸುಮಾರು 1000 ರಿಂದ 1500 ಲೀಟರ್‌ನಷ್ಟು ನೀರನ್ನು ಪೂರೈಸಲಾಗುತ್ತಿತ್ತು. ಪ್ರಸ್ತುತ ದಿನಗಳಲ್ಲಿ ಇದೇ ಪ್ರಮಾಣವನ್ನು ಪೂರೈಸಲಾಗುತ್ತಿರುತ್ತದೆ. |
| ಈ) | ಬೆಂಗಳೂರು ನಗರದ ಕೆಲವೊಂದು ನಗರಗಳಲ್ಲಿ ನೀರು ಬಿಡಲು ತಾರತಮ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ? (ವಿವರ ನೀಡುವುದು) | ಗಮನಕ್ಕೆ ಬಂದಿರುವುದಿಲ್ಲ. |

ಸಂಖ್ಯೆ: ನಅಇ 39 ಎಂಎನ್ಐ 2024

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ